All India Radio: Bangalore
National Bulletin In Kannada
02.10.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಮಹಾತ್ಮಾಗಾಂಧಿಯವರ ೧೫೬ನೇ ಜಯಂತಿ : ಜಗತ್ತಿನಾದ್ಯಂತ ಅಂತಾರಾಷ್ಟ್ರೀಯ ಅಹಿಂಸಾ ದಿನವಾಗಿ ಆಚರಣೆ ; ದೇಶದೆಲ್ಲಡೆ ರಾಷ್ಟ್ರಪಿತನಿಗೆ ಗೌರವ ನಮನ
2. ದೇಶಾದ್ಯಂತ ಇಂದು ವಿಜಯದಶಮಿ-ದಸರಾ ಹಬ್ಬ ; ಮೈಸೂರಿನಲ್ಲಿ ಜಂಬೂ ಸವಾರಿಗೆ ಸಕಲ ಸಿದ್ಧತೆ
3. ಮುಂದಿನ ಋತುವಿಗೆ ಕಡ್ಡಾಯ ಹಿಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಿದ ಕೇಂದ್ರ ಸರ್ಕಾರ
4. ಮಹಿಳಾ ಏಕದಿನ ವಿಶ್ವಕಪ್ ಕ್ರಿಕೆಟ್ ; ನ್ಯೂಜಿಲೆಂಡ್ ವಿರುದ್ಧ ೮೯ ರನ್‌ಗಳ ಜಯಗಳಿಸಿದ ಆಸ್ಟ್ರೇಲಿಯಾ

<><><><>

ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ಜನ್ಮ ವಾರ್ಷಿಕೋತ್ಸವದಂದು ಇಂದು ರಾಷ್ಟ್ರವು ಅವರಿಗೆ ಗೌರವ ಸಲ್ಲಿಸುತ್ತದೆ. ದೇಶಾದ್ಯಂತ ಮತ್ತು ವಿದೇಶದಲ್ಲಿರುವ ಭಾರತೀಯ ಮಿಷನ್‌ಗಳು ಸರಣಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿವೆ. ರಾಷ್ಟ್ರ ರಾಜಧಾನಿಯ ರಾಜ್‌ಘಾಟ್‌ನಲ್ಲಿರುವ ಮಹಾತ್ಮ ಗಾಂಧಿಯವರ ಸಮಾಧಿಯಲ್ಲಿ ಸರ್ವ ಧರ್ಮ ಪ್ರಾರ್ಥನಾ ಸಭೆಯನ್ನು ಆಯೋಜಿಸಲಾಗಿದೆ. ಹಾಗೆಯೇ ಇಂದು ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮ ವಾರ್ಷಿಕೋತ್ಸವದಂದು ರಾಷ್ಟ್ರವು ಅವರನ್ನು ಸ್ಮರಿಸುತ್ತಿದೆ. ಮಹಾತ್ಮ ಗಾಂಧಿಯವರ ಜನ್ಮ ದಿನಾಚರಣೆಯ ಅಂಗವಾಗಿ ಇಂದು ಜಗತ್ತಿನಾದ್ಯಂತ ಅಂತಾರಾಷ್ಟ್ರೀಯ ಅಹಿಂಸಾ ದಿನವನ್ನು ಆಚರಿಸಲಾಗುತ್ತಿದೆ. ಜೂನ್ ೨೦೦೭ ರಲ್ಲಿ, ವಿಶ್ವಸಂಸ್ಥೆಯ ಸಾಮಾನ್ಯ ಸಭೆಯು ಅಹಿಂಸೆಯನ್ನು ಸಾರ್ವತ್ರಿಕ ತತ್ವವಾಗಿ ದೃಢೀಕರಿಸುವ ಮತ್ತು ಶಾಂತಿ ಮತ್ತು ಸಹಿಷ್ಣುತೆಯ ಜಾಗತಿಕ ಸಂಸ್ಕೃತಿಯನ್ನು ಉತ್ತೇಜಿಸುವ ನಿರ್ಣಯವನ್ನು ಅಂಗೀಕರಿಸಿತು. ರಾಷ್ಟ್ರಪಿತ ಮಹಾತ್ಮ ಗಾಂಧಿಯವರ ೧೫೬ನೇ ಜನ್ಮ ದಿನಾಚರಣೆಯಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ

ಗೌರವ ಸಲ್ಲಿಸಿದರು. ರಾಷ್ಟ್ರಪಿತನ ಆದರ್ಶಗಳು ಮತ್ತು ಮೌಲ್ಯಗಳಿಗೆ ಇದು ಸಮರ್ಪಿಸುವ ಸಂದರ್ಭ ಎಂದು ರಾಷ್ಟ್ರಪತಿ ಮುರ್ಮು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

<><><><>

ದೇಶಾದ್ಯಂತ ಇಂದು ವಿಜಯದಶಮಿ ಅಥವಾ ದಸರಾ ಹಬ್ಬವನ್ನು ಆಚರಿಸಲಾಗುತ್ತಿದೆ. ಈ ದಿನ ನವರಾತ್ರಿ ಮತ್ತು ದುರ್ಗಾ ಪೂಜೆಯ ಪರಾಕಾಷ್ಠೆಯನ್ನು ಸಹ ಸೂಚಿಸುತ್ತದೆ. ರಾವಣನ ಮೇಲೆ ರಾಮನ ವಿಜಯವನ್ನು ಸ್ಮರಿಸಲು ಈ ಹಬ್ಬವನ್ನು ಆಚರಿಸಲಾಗುತ್ತದೆ. ಇದು ಕೆಟ್ಟದ್ದರ ಮೇಲೆ ಒಳ್ಳೆಯದರ ವಿಜಯವನ್ನು ಸೂಚಿಸುತ್ತದೆ. ದೆಹಲಿಯ ಕೆಂಪು ಕೋಟೆಯ ಮಾಧವ ದಾಸ್ ಪಾರ್ಕ್‌ನಲ್ಲಿ ನಡೆಯುವ ದಸರಾ ಆಚರಣೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಲಿದ್ದಾರೆ. ರಾಷ್ಟ್ರ ರಾಜಧಾನಿಯಲ್ಲಿ ಐಪಿ ವಿಸ್ತರಣಾ ರಾಮಲೀಲಾ ಸಮಿತಿ ಆಯೋಜಿಸಿರುವ ದಸರಾ ಆಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ವಿಜಯದಶಮಿಯ ಶುಭ ಸಂದರ್ಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ರಾಷ್ಟ್ರಕ್ಕೆ ಶುಭಾಶಯ ಕೋರಿದ್ದಾರೆ. ಕರ್ನಾಟಕದ ಮೈಸೂರಿನಲ್ಲಿ ನಡೆಯುತ್ತಿರುವ ನಾಡಹಬ್ಬ ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂ ಸವಾರಿ ವಿಜಯ ದಶಮಿಯಾದ ಇಂದು ನೆರವೇರಲಿದೆ. ಜಂಬೂ ಸವಾರಿ  ಕಣ್ತುಂಬಿಕೊಳ್ಳಲು ಲಕ್ಷಾಂತರ ಮಂದಿ ಕಾತುರರಾಗಿದ್ದು ಜಿಲ್ಲಾಡಳಿತ ಸಕಲ ಸಿದ್ಧತೆ ಕೈಗೊಂಡಿದೆ. ಇಂದು ಮಧ್ಯಾಹ್ನ ಅರಮನೆ ಬಲರಾಮ ದ್ವಾರದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಂದೀ ಧ್ವಜಕ್ಕೆ ಪೂಜೆ ನೆರವೇರಿಸಿ ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ.

<><><><>

ಭಾರತ-ಯುರೋಪಿಯನ್ ಮುಕ್ತ ವ್ಯಾಪಾರ ಸಂಘ- ಇಈಖಿಂ, ವ್ಯಾಪಾರ ಮತ್ತು ಆರ್ಥಿಕ ಪಾಲುದಾರಿಕೆ ಒಪ್ಪಂದ-ಖಿಇಃ಼ಂ , ಯುರೋಪಿನೊಂದಿಗಿನ ಭಾರತದ ಆರ್ಥಿಕ ಪಾಲುದಾರಿಕೆಯಲ್ಲಿ ಒಂದು ನಿರ್ಣಾಯಕ ಕ್ಷಣವಾಗಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಭಾರತ-ಇಈಖಿಂ ಸಮೃದ್ಧಿ ಶೃಂಗಸಭೆಯಲ್ಲಿ ಅವರು ಇದು ಮಿತ್ರ ರಾಷ್ಟ್ರಗಳ  ನಡುವಿನ ವಿಶ್ವಾಸಾರ್ಹ ಪಾಲುದಾರಿಕೆಯನ್ನು ಪ್ರತಿನಿಧಿಸುತ್ತದೆ. ಆರ್ಥಿಕ ಪಾಲುದಾರಿಕೆ ಒಪ್ಪಂದ ಜೀವ ವಿಜ್ಞಾನ, ಶುದ್ಧ ಇಂಧನ, ಕೃತಕ ಬುದ್ಧಿಮತ್ತೆ, ಶಿಕ್ಷಣ ಮತ್ತು ಪ್ರವಾಸೋದ್ಯಮದಾದ್ಯಂತ ವ್ಯಾಪಕವಾದ ಅವಕಾಶಗಳನ್ನು

ತೆರೆದಿಡುತ್ತದೆ ಹಾಗೂ ಸಮತೋಲನ ಮತ್ತು ನ್ಯಾಯಸಮ್ಮತತೆಯನ್ನು ಖಾತ್ರಿಪಡಿಸುವ ದೃಢ ಹೂಡಿಕೆ ಬದ್ಧತೆಯಾಗಿದೆ ಎಂದು ಸಚಿವರು ಹೇಳಿದರು.

ಧ್ವನಿ : ಪಿಯೂಷ್ ಗೋಯಲ್ (೩೧ ಸೆಕೆಂಡ್‌ಗಳು)

ಇಈಖಿಂ ರಾಷ್ಟ್ರಗಳಿಂದ ವ್ಯವಹಾರಗಳನ್ನು ಆಹ್ವಾನಿಸಿದ ಸಚಿವರು, ಭಾರತದ ಮುಕ್ತ, ಪಾರದರ್ಶಕ ಮತ್ತು ಹೂಡಿಕೆದಾರ ಸ್ನೇಹಿ ವಾತಾವರಣದ ಬಗ್ಗೆ ಭರವಸೆ ನೀಡಿದರು. ಆಸಕ್ತಿಯ ಬಹುತೇಕ ಎಲ್ಲಾ ವಲಯಗಳಲ್ಲಿ ೧೦೦ ಪ್ರತಿಶತ ವಿದೇಶಿ ನೇರ ಹೂಡಿಕೆಗೆ ಅವಕಾಶವಿದೆ. ಹೂಡಿಕೆದಾರರಿಗೆ ಸುಗಮ, ವೇಗವಾದ ಮತ್ತು ಹೆಚ್ಚು ಪರಿಣಾಮಕಾರಿ ಮಾರ್ಗಗಳನ್ನು ಖಚಿತಪಡಿಸಿಕೊಳ್ಳಲು ಭಾರತ ಸರ್ಕಾರ ಬದ್ಧವಾಗಿದೆ ಎಂದು ಅವರು ತಿಳಿಸಿದರು.

<><><><>

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಪ್ರಸಕ್ತ ಹಣಕಾಸು ವರ್ಷದಲ್ಲಿ ತನ್ನ ಜಿಡಿಪಿ ಬೆಳವಣಿಗೆಯ ಅಂದಾಜುಗಳನ್ನು ಶೇಕಡ ೬.೮ ಕ್ಕೆ ಪರಿಷ್ಕರಿಸಿದೆ. ಇದು ಪ್ರಸಕ್ತ ಹಣಕಾಸು ವರ್ಷದಲ್ಲಿ ಹಣದುಬ್ಬರವನ್ನು ಶೇಕಡ ೨.೬ ಕ್ಕೆ ಅಂದಾಜಿಸಿದೆ, ಇದು ಹಿಂದಿನ ಅಂದಾಜಿಗಿಂತ ಕಡಿಮೆಯಾಗಿದೆ. ಈ ವರ್ಷದ ಆಗಸ್ಟ್‌ನಲ್ಲಿ, ಆರ್‌ಬಿಐ ಪ್ರಸಕ್ತ ಹಣಕಾಸು ವರ್ಷಕ್ಕೆ ಶೇಕಡ ೬.೫ ರಷ್ಟು ಜಿಡಿಪಿ ಬೆಳವಣಿಗೆಯ ದರವನ್ನು ಅಂದಾಜು ಮಾಡಿತ್ತು, ಜೊತೆಗೆ ಹಣದುಬ್ಬರ ಮುನ್ಸೂಚನೆಯು ಶೇಕಡ ೩.೧ ರಷ್ಟಿತ್ತು. ಆದಾಗ್ಯೂ, ಆರ್‌ಬಿಐ ಬಡ್ಡಿದರಗಳನ್ನು ಬದಲಿಸಿಲ್ಲ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಇಂದು ಮುಂಬೈನಲ್ಲಿ ತಿಳಿಸಿದ್ದಾರೆ.

<><><><>

ಮುಂದಿನ ವರ್ಷದ ಮಾರುಕಟ್ಟೆ ಋತುವಿಗಾಗಿ ಎಲ್ಲಾ ಕಡ್ಡಾಯ ಹಿಂಗಾರು ಬೆಳೆಗಳಿಗೆ ಸರ್ಕಾರ ಕನಿಷ್ಠ ಬೆಂಬಲ ಬೆಲೆಗಳನ್ನು ಹೆಚ್ಚಿಸಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಆರ್ಥಿಕ ವ್ಯವಹಾರಗಳ ಸಚಿವ ಸಂಪುಟ ಸಮಿತಿ ಈ ನಿರ್ಧಾರ ತೆಗೆದುಕೊಂಡಿದೆ. ಕುಸುಬೆಗೆ ಹೆಚ್ಚಳ ಘೋಷಿಸಲಾಗಿದ್ದು, ಕ್ವಿಂಟಲ್‌ಗೆ ೬೦೦ ರೂಪಾಯಿ ಹೆಚ್ಚಿಸಲಾಗಿದೆ, ನಂತರ ಮಸೂರ್ ಕ್ವಿಂಟಲ್‌ಗೆ ೩೦೦ ರೂಪಾಯಿ ಹೆಚ್ಚಳವಾಗಿದೆ. ರಾಪ್ಸೀಡ್ ಮತ್ತು ಸಾಸಿವೆಯ ಬೆಂಬಲ ಬೆಲೆಗಳನ್ನು ಕ್ವಿಂಟಲ್‌ಗೆ ೨೫೦ ರೂಪಾಯಿ, ಬಾರ್ಲಿ ಕ್ವಿಂಟಲ್‌ಗೆ ೧೭೦ ರೂಪಾಯಿ ಮತ್ತು ಗೋಧಿಗೆ ೧೬೦ ರೂಪಾಯಿ ಹೆಚ್ಚಿಸಲಾಗಿದೆ. ಸಂಪುಟ ಸಭೆಯ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ

ಮಾಹಿತಿ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಪರಿಷ್ಕೃತ ಬೆಂಬಲ ಬೆಲೆಗಳು ರೈತರಿಗೆ ಲಾಭದಾಯಕ ಆದಾಯವನ್ನು ಒದಗಿಸುವುದಲ್ಲದೆ, ಬೆಳೆ ವೈವಿಧ್ಯೀಕರಣವನ್ನು ಉತ್ತೇಜಿಸುತ್ತದೆ ಮತ್ತು ಭಾರತದ ಕೃಷಿ ಆರ್ಥಿಕತೆಯಲ್ಲಿ ಹೆಚ್ಚಿನ ಸ್ಥಿತಿಸ್ಥಾಪಕತ್ವಕ್ಕೆ ಕೊಡುಗೆ ನೀಡುತ್ತದೆ ಎಂದು ಹೇಳಿದರು. ದೇಶೀಯ ಉತ್ಪಾದನೆಯನ್ನು ಹೆಚ್ಚಿಸುವ ಮತ್ತು ದ್ವಿದಳ ಧಾನ್ಯಗಳಲ್ಲಿ ಸ್ವಾವಲಂಬನೆಯನ್ನು ಸಾಧಿಸುವ ಗುರಿಯನ್ನು ಹೊಂದಿರುವ ಮೈಲಿಗಲ್ಲು ಉಪಕ್ರಮವಾದ ದ್ವಿದಳ ಧಾನ್ಯಗಳಲ್ಲಿ ಆತ್ಮನಿರ್ಭರ ಮಿಷನ್ ಅನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಕೇಂದ್ರ ಸರ್ಕಾರಿ ಉದ್ಯೋಗಿಗಳಿಗೆ ತುಟ್ಟಿ ಭತ್ಯೆ ಮತ್ತು ಪಿಂಚಣಿದಾರರಿಗೆ ಶೇ.೩ ರಷ್ಟು ತುಟ್ಟಿ ಪರಿಹಾರವನ್ನು ಕೇಂದ್ರ ಸಚಿವ ಸಂಪುಟವು ಅನುಮೋದಿಸಿದೆ. ಇದು ಸುಮಾರು ೪೯.೨ ಲಕ್ಷ ಕೇಂದ್ರ ಸರ್ಕಾರಿ ನೌಕರರು ಮತ್ತು ೬೮.೭ ಲಕ್ಷ ಪಿಂಚಣಿದಾರರಿಗೆ ಪ್ರಯೋಜನವನ್ನು ನೀಡುತ್ತದೆ, ಇದು ಈ ವರ್ಷ ಜುಲೈ ೧ ರಿಂದ ಜಾರಿಗೆ ಬರಲಿದೆ ಎಂದು ಸಚಿವರು ಹೇಳಿದರು. ಐದು ಸಾವಿರದ ೮೬೨ ಕೋಟಿ ರೂಪಾಯಿಗಳಿಗಿಂತ ಹೆಚ್ಚು ವೆಚ್ಚದಲ್ಲಿ ದೇಶಾದ್ಯಂತ ೫೭ ಹೊಸ ಕೇಂದ್ರೀಯ ವಿದ್ಯಾಲಯಗಳನ್ನು ತೆರೆಯಲು ಸಂಪುಟ ಸಮಿತಿ ಅನುಮೋದನೆ ನೀಡಿದೆ.

<><><><>

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಏಕದಿನ ವಿಶ್ವಕಪ್ ಪಂದ್ಯದಲ್ಲಿ ಆಸ್ಟ್ರೇಲಿಯಾ ವನಿತೆಯರ ತಂಡ, ನ್ಯೂಜಿಲೆಂಡ್ ತಂಡದ ವಿರುದ್ಧ ೮೯ ರನ್‌ಗಳಿಂದ ಜಯಗಳಿಸಿದೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಆಸ್ಟ್ರೇಲಿಯಾ ೪೯.೩ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೩೨೬ ರನ್ ಗಳಿಸಿತು. ಆಸ್ಟ್ರೇಲಿಯಾ ಪರ ಆಶ್ಲೆ ಗಾರ್ಡ್ನರ್ ೧೧೫ ರನ್ ಗಳಿಸಿದರು. ನ್ಯೂಜಿಲೆಂಡ್ ಪರ ಲಿಯಾ ತಹುಹು, ಜೆಸ್ ಕೆರ್ ತಲಾ ೩ ವಿಕೆಟ್ ಪಡೆದರು. ೩೨೭ ರನ್‌ಗಳ ಗುರಿ ಬೆನ್ನತ್ತಿದ ನ್ಯೂಜಿಲೆಂಡ್ ತಂಡ ಸೋಫಿ ಡಿವೈನ್ ಅವರ ಆಕರ್ಷಕ ಶತಕದ ಹೊರತಾಗಿಯೂ ೪೩.೨ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೨೩೭ ರನ್ ಗಳಿಸಲಷ್ಟೇ ಶಕ್ತವಾಯಿತು. ಕೊಲೊಂಬೋದ ಆರ್.ಪ್ರೇಮದಾಸ ಕ್ರೀಡಾಂಗಣದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ಬಾಂಗ್ಲಾದೇಶ ಮತ್ತು ಪಾಕಿಸ್ತಾನ ವನಿತೆಯರ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಪ್ರಾರಂಭವಾಗಲಿದೆ.

<><><><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಆತಿಥೇಯ ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಮೊದಲ ಪಂದ್ಯವು ಇಂದು ಬೆಳಿಗ್ಗೆ ೯:೩೦ ಕ್ಕೆ ಆರಂಭವಾಗಲಿದೆ. ಶುಭಮನ್ ಗಿಲ್ ನೇತೃತ್ವದಲ್ಲಿ ಭಾರತ ಕಣಕ್ಕೆ ಇಳಿಯಲಿದೆ. ಭಾರತ ಎರಡು ತಿಂಗಳ ಹಿಂದೆ ಇಂಗ್ಲೆಂಡ್ ವಿರುದ್ಧ ಕೊನೆಯ ಟೆಸ್ಟ್ ಸರಣಿಯನ್ನು ಆಡಿತ್ತು ಮತ್ತು ಸರಣಿಯನ್ನು ೨-೨ ಅಂತರದಿಂದ ಡ್ರಾ ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿತ್ತು. ಮತ್ತೊಂದೆಡೆ, ವೆಸ್ಟ್ ಇಂಡೀಸ್ ಆಸ್ಟ್ರೇಲಿಯಾ ವಿರುದ್ಧದ ತವರು ಸರಣಿ ಸೋಲಿನಿಂದ ಹೊರಬರುತ್ತಿದೆ. ಭಾರತ ಮತ್ತು ವೆಸ್ಟ್ ಇಂಡೀಸ್ ನಡುವಿನ ಸರಣಿಯ ಎರಡನೇ ಟೆಸ್ಟ್ ಪಂದ್ಯವು ಅಕ್ಟೋಬರ್ ೧೦ ರಿಂದ ದೆಹಲಿಯಲ್ಲಿ ನಡೆಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>